ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

**ಸಂಖ್ಯೆ : ಸಂಖ್ಯೆ : ಸಿ5(2) ಪವ್ಯ.ಬ.02/2021-22** **ದಿನಾಂಕ: 09-05-2022**

-:**ಅಧಿಸೂಚನೆ**:-

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಬೋಧಕೇತರ) ವೃಂದದಿಂದ ಪತ್ರಾಂಕಿತ ಸಹಾಯಕರ ಹುದ್ದೆಗೆ ಪದೋನ್ನತಿ ನೀಡಿರುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3 :- ದಿನಾಂಕ : 09-05-2022 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

* * * * * *

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ಸಹಾಯಕರ ವೃಂದಕ್ಕೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ, ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ಸಹಾಯಕರ ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು (ಬೋಧಕೇತರ) ವೃಂದದಿಂದ ಪತ್ರಾಂಕಿತ ಸಹಾಯಕರ ಹುದ್ದೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ : 09-05-2022 ರಂದು ಇಲಾಖಾ ಮುಂಬಡ್ತಿ ಸಭೆ ನಡೆಸಿ ಈ ಕೆಳಕಂಡ ಅರ್ಹ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರುಗಳಿಗೆ ಪತ್ರಾಂಕಿತ ಸಹಾಯಕರಾಗಿ ಮುಂಬಡ್ತಿ ನೀಡಲು ತೀರ್ಮಾನಿಸಲಾಯಿತು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ "ಬಿ" ವೃಂದದ ವೇತನ ಶ್ರೇಣಿ ರೂ. 40900-78200 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಪತ್ರಾಂಕಿತ ವ್ಯವಸ್ಥಾಕರು/ಸಹಾಯಕ ನಿರ್ದೇಶಕರು(ಬೋಧಕೇತರ) ಇವರುಗಳಿಗೆ ಪತ್ರಾಂಕಿತ ಸಹಾಯಕ ಹುದ್ದೆಗಳಿಗೆ ವೇತನ ಶ್ರೇಣಿ ರೂ. 43100-83900 ಯಲ್ಲಿ ಸ್ಥಾನಪನ್ನ ಬಡ್ತಿಯನ್ನು ನೀಡಿ ಆದೇಶಿಸಲಾಗಿದೆ. ಈ ಅಧಿಕಾರಿಗಳಿಗೆ ಸ್ಥಳ ನಿಯುಕ್ತಿ ಆದೇಶವನ್ನು ಹೊರಡಿಸಿದ ನಂತರ ಅವರು ಬಡ್ತಿ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಆರ್ಥಿಕ ಸೌಲಭ್ಯಕ್ಕೆ ಅರ್ಹರಾಗುತ್ತಾರೆ.

| ಕ್ರಮ ಸಂಖ್ಯೆ | ಜೇಷ್ಟತಾ ಸಂಖ್ಯೆ | ಪತ್ರಾಂಕಿತ ವ್ಯವಸ್ಥಾಕರು/ಸಹಾಯಕ ನಿರ್ದೇಶಕರು(ಬೋಧಕೇತರ) ಹೆಸರು ಶ್ರೀ / ಶ್ರೀಮತಿ |
|---|---|---|
| 01 | **206** | ಡಿ.ಕೊಟ್ರೇಶ್, ಪತ್ರಾಂಕಿತ ವ್ಯವಸ್ಥಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ದಾವಣಗೆರೆ ಉತ್ತರ ತಾಲ್ಲೂಕು ಮತ್ತು ಜಿಲ್ಲೆ. |
| 02 | **228** | ಕೆ.ಎಂ. ವಿನಯ್ ಕುಮಾರ್, ಪತ್ರಾಂಕಿತ ಸಹಾಯಕರು, [**ನಿಯಮ -32**] ಉಪ ನಿರ್ದೇಶಕರ ಕಛೇರಿ, ರಾಮನಗರ ಜಿಲ್ಲೆ. |
| 03 | **230** | ಬಿ.ವಿ.ಚಂದ್ರಶೇಖರ್, ಪತ್ರಾಂಕಿತ ವ್ಯವಸ್ಥಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಬಾಗೇಪಲ್ಲಿ ತಾಲ್ಲೂಕು. ಚಿಕ್ಕಬಳ್ಳಾಪುರ ಜಿಲ್ಲೆ. |
| 04 | **296** | ಎಸ್. ವಿ. ರಾಮಪ್ರಸನ್ನ ಪತ್ರಾಂಕಿತ ವ್ಯವಸ್ಥಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ರಾಮನಗರ ತಾಲ್ಲೂಕು ಮತ್ತು ಜಿಲ್ಲೆ. |

ಸ್ಥಾನಪನ್ನ ಬಡ್ತಿ ಹೊಂದಿದ ಮೇಲ್ಕಂಡ ಅಧಿಕಾರಿಗಳಿಗೆ ದಿನಾಂಕ: 10-05-2022 ರಂದು ಬೆಳಿಗ್ಗೆ 11-00 ಗಂಟೆಗೆ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇಲ್ಲಿ ಸ್ಥಳ ನಿಯುಕ್ತಿಗೆ ಕೌನ್ಸಿಲಿಂಗ್ ನಡೆಸಲಾಗುವುದು. ಬಡ್ತಿ ಹೊಂದಿದ ಅಧಿಕಾರಿಗಳು ನಿಗದಿತ ದಿನಾಂಕದಂದು ಕೌನ್ಸಿಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳಲು ಸೂಚಿಸಿದೆ.

**ಡಾ. ವಿಶಾಲ್.ಆರ್. ಭಾ.ಆ.ಸೇ.,**
**ಆಯುಕ್ತರು**
**ಸಾರ್ವಜನಿಕ ಶಿಕ್ಷಣ ಇಲಾಖೆ.**

9/5/22

**ಇವರಿಗೆ,**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ ಖಚಿಇಾ ಖುಂಬಿಜಜ ಅಂರಿಥಿ.

3. ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
4. ಸಂಬಂಧಿಸಿದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ,
5. ಈ ಕಛೇರಿಯ ಎಲ್ಲಾ ಶಾಖಾಧಿಕಾರಿಗಳಿಗೆ,
6. ಸಂಬಂದಿಸಿದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ,
7. ಸಂಬಂಧಿಸಿದ ಬಡ್ತಿ ಹೊಂದಿದ ಅಧಿಕಾರಿಗಳಿಗೆ,
8. ಈ ಅಧಿಸೂಚನೆಯನ್ನು ಇಲಾಖಾ ವೆಬ್‌ಸೈಟ್-www.schooleducation.kar.in "ನಲ್ಲಿ ಪ್ರಕಟಿಸಲಾಗಿದೆ.
9. ಕಛೇರಿ ಪ್ರತಿ.